ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 07–12–2020

## ಪತ್ರಿಕಾ ಪ್ರಕಟಣೆ

# ರಾಜ್ಯ ವಿಧಾನಸಭೆಯಲ್ಲಿ ಅಗಲಿದ ಗಣ್ಯರಿಗೆ ಶ್ರದ್ಧಾಂಜಲಿ

ಬೆಂಗಳೂರು, ಡಿಸೆಂಬರ್ 7 ( ಕರ್ನಾಟಕ ವಾರ್ತೆ ) :

ಕಳೆದ ಅಧಿವೇಶನದ ಅವಧಿಯಿಂದ ಈ ಅವಧಿವೇಶನದ ಅವಧಿಯಲ್ಲಿ ಅಗಲಿದ ಗಣ್ಯರಿಗೆ ಚಳಿಗಾಲದ ಅಧಿವೇಶನದ ಮೊದಲನೆಯ ದಿನವಾದ ಇಂದು ರಾಜ್ಯ ವಿಧಾನ ಸಭೆಯಲ್ಲಿ ಮುಖ್ಯಮಂತ್ರಿ, ಪ್ರತಿಪಕ್ಷ ನಾಯಕರೂ ಒಳಗೊಂಡಂತೆ ಸದಸ್ಯರು ಅಗಲಿದ ಚೇತನರ ಸಾಧನೆಗಳನ್ನು ಸ್ಮರಿಸಿ ಶ್ರದ್ಧಾಂಜಲಿ ಅರ್ಪಿಸಿದರು.

ಹದಿನೈದನೇ ವಿಧಾನ ಸಭೆಯ ಎಂಟನೇ ಅಧಿವೇಶನ ಪ್ರಾರಂಭವಾಗುತ್ತಿದ್ದಂತೆ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಇತ್ತೀಚೆಗೆ ಅಗಲಿದ ಕೇಂದ್ರದ ಮಾಜಿ ಸಚಿವ ರಾಮ್ ವಿಲಾಸ್ ಪಾಸ್ವಾನ್, ಮಾಜಿ ಸಚಿವ ಡಾ ವೈ ನಾಗಪ್ಪ, , ರಾಜ್ಯ ವಿಧಾನ ಸಭೆಯ ಮಾಜಿ ಸದಸ್ಯರಾದ ಕೆ. ಮಲ್ಲಪ್ಪ ಮತ್ತು ರತನ್ ಕುಮಾರ್ ಕಟ್ಟೆಮಾರ್, ಕೇಂದ್ರದ ಮಾಜಿ ಸಚಿವ ಜಸ್ವಂತ್ ಸಿಂಗ್, ಹೆಸರಾಂತ ವಿಮರ್ಶಕ ಡಾ ಜಿ ಎಸ್ ಅಮೂರ, ಸಹಕಾರಿ ಕ್ಷೇತ್ರದ ಧುರೀಣ, ಡಾ ವಿ. ಎಸ್. ಸೋಂದೆ ಹಾಗೂ ಹಿರಿಯ ಪತ್ರಕರ್ತ ರವಿ ಬೆಳಗೆರೆ ಅವರ ಸಾಧನಾ ಚಿತ್ರಣದ ಗುಣಗಾನ ಮಾಡಿದರು.

ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪ, ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಗೋವಿಂದ ಎಂ ಕಾರಜೋಳ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ ಸಿ ಮಾಧುಸ್ವಾಮಿ, ಜಾತ್ಯಾತೀತ ಜನತಾದಳದ ರಾಜ್ಯಾಧ್ಯಕ್ಷ ಹೆಚ್. ಕೆ. ಕುಮಾರಸ್ವಾಮಿ, ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಯು ಟಿ ಖಾದರ್, ಬಹುಜನ ಸಮಾಜ ಪಕ್ಷದ ಸದಸ್ಯ ಎನ್ ಮಹೇಶ್ ಅವರು ಸಭಾಧ್ಯಕ್ಷರು ಮಂಡಿಸಿದ ಸಂತಾಪ ಸೂಚಕ ನಿರ್ಣಯಕ್ಕೆ ಬೆಂಬಲಿಸಿದ ನಂತರ ಮೃತರ ಗೌರವಾರ್ಥ ಎಲ್ಲಾ ಸದಸ್ಯರೂ ಒಂದು ನಿಮಿಷಗಳ ಕಾಲ ಮೌನ ಆಚರಿಸಿ ಅಗಲಿದ ಚೇತನಗಳಿಗೆ ಶ್ರದ್ಧಾಂಜಲಿ ಸಲ್ಲಿಸಿದರು.

ಡಿ ಪಿ ಎಂ

## ನೂತನ ತಾಲ್ಲೂಕು ಕೇಂದ್ರ ಇಳಕಲ್‌ನಲ್ಲಿ ಮಿನಿ ವಿಧಾನಸೌಧ

**ಬೆಂಗಳೂರು, ಡಿಸೆಂಬರ್ 07 (ಕರ್ನಾಟಕ ವಾರ್ತೆ):**

ನೂತನ ತಾಲ್ಲೂಕು ಕೇಂದ್ರವಾಗಿರುವ ಇಳಕಲ್‌ನಲ್ಲಿ ಮಿನಿ ವಿಧಾನ ಸೌಧ ಕಟ್ಟಡ ಕಟ್ಟಲು ಇಳಕಲ್ ಗ್ರಾಮದಲ್ಲಿ ಶಿಕ್ಷಣ ಇಲಾಖೆಗೆ ಸೇರಿದ 02–04 ಎ/ಗು ಜಮೀನನ್ನು ಗುರುತಿಸಲಾಗಿದ್ದು, ಸದರಿ ಜಮೀನ್ನು ಮಂಜೂರು ಮಾಡುವಂತೆ ಜಿಲ್ಲಾಧಿಕಾರಿ ಬಾಗಲಕೋಟೆ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಸದರಿ ಜಮೀನು ಮಂಜೂರು ಮಾಡುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ ಎಂದು ಕಂದಾಯ ಸಚಿವ ಆರ್. ಅಶೋಕ್ ಅವರು ಉತ್ತರಿಸಿದರು.

ಇಂದು ವಿಧಾನಸಭೆಯ ಕಲಾಪದಲ್ಲಿ ಹೊಸದಾಗಿ ತಾಲ್ಲೂಕು ಕೇಂದ್ರವಾಗಿರುವ ಇಳಕಲ್‌ನಲ್ಲಿ ಮಿನಿ ವಿಧಾನಸೌಧ ಕಟ್ಟಡ ನಿರ್ಮಾಣ ಮಾಡುವ ಕುರಿತು ಪ್ರಸಕ್ತ ಸಾಲಿನಲ್ಲಿ ಅನುದಾನ ಮಂಜೂರು ಮಾಡಿರುವ ಕುರಿತು ಹುನಗುಂದ ಶಾಸಕ ದೊಡ್ಡನಗೌಡ ಪಾಟೀಲ್ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ಮಿನಿ ವಿಧಾನಸೌಧ ಕಟ್ಟಡ ನಿರ್ಮಾಣ ಮಾಡಲು ಸ್ಥಳ ಮಂಜೂರಾತಿ ದೊರೆತ ನಂತರ ಜಿಲ್ಲಾಧಿಕಾರಿ, ಬಾಗಲಕೋಟೆ ಇವರಿಂದ ಸವಿವರ ಅಂದಾಜು ಪಟ್ಟಿಯೊಂದಿಗೆ ಪ್ರಸ್ತಾವನೆ ಪಡೆದು ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ ಕ್ರಮವಹಿಸಲಾಗುತ್ತದೆ ಎಂದು ಸದನಕ್ಕೆ ತಿಳಿಸಿದರು.

## ಸ್ವಯಂ ಶಿಸ್ತು ಅವಶ್ಯಕ – ಕಾಗೇರಿ

**ಬೆಂಗಳೂರು, ಡಿಸೆಂಬರ್ 07 (ಕರ್ನಾಟಕ ವಾರ್ತೆ):**

ಕರೋನ ಸಕ್ರಿಯವಾಗಿದೆ. ಕರೋನಾ ಹೋಗಿಲ್ಲ. ಈಗಾಗಲೇ ಎರಡನೇ ಅಲೆ ಪ್ರಾರಂಭವಾಗುತ್ತಿದೆ. ಸದನದಲ್ಲಿ ಪ್ರತಿಯೊಬ್ಬರು ಮಾಸ್ಕ್ ಧರಿಸಿ ಸಾಮಾಜಿಕ ಅಂತರ ಕಾಯ್ದುಕೊಂಡು ಸ್ಯಾನಿಟೈಸರ್ ಬಳಸಿ ಕೋವಿಡ್ ಮಾರ್ಗಸೂಚಿಗಳನ್ನು ಪಾಲಿಸಬೇಕು ಎಂದು ಸಭಾಧ್ಯಕ್ಷರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ತಿಳಿಸಿದರು.

ಇಂದು ಸದನದಲ್ಲಿ ಸದಸ್ಯರನ್ನು ಉದ್ದೇಶಿಸಿ ಮಾತನಾಡಿದ ಅವರು ಕರೋನಾ ಕುರಿತಂತೆ ಜಾಗೃತಿ ವಹಿಸಿಕೊಳ್ಳಬೇಕು. ಅನಾರೋಗ್ಯವಿದ್ದರೆ ಬ್ಯಾಕ್ವೆಂಟ್ ಹಾಲ್‌ನಲ್ಲಿ ವೈದ್ಯರ ತಂಡ ಇದೆ. ತಪಾಸಣೆ ಮಾಡಿಸಿಕೊಳ್ಳಬೇಕು. ಸದನದಲ್ಲಿ ಗುಂಪಾಗಿ ನಿಂತು ಮಾತನಾಡಬಾರದು. ಸದಸ್ಯರ ಅಥವಾ ಸಚಿವರ ಜೊತೆ ಮಾತನಾಡಬೇಕೆಂದರೆ ಸದನದ ಹೊರಗೆ ಮಾತನಾಡಿ ಸದನದ ಶಿಸ್ತು ಪಾಲಿಸಿ. ಸ್ವಯಂಶಿಸ್ತಿನಿಂದ ವೈಯಕ್ತಿಕ ಜವಾಬ್ದಾರಿ ವಹಿಸಬೇಕು ಎಂದು ತಿಳಿಸಿದರು.

ಸದನದ ಕೊನೆಯ ಎರಡು ದಿನಗಳನ್ನು ಇತ್ತೀಚೆಗೆ ಗುಜರಾತ್ ಕೆವಾಡಿಯಲ್ಲಿ ನಡೆದ ಎಲ್ಲಾ ರಾಜ್ಯಗಳ ಸ್ಪೀಕರ್‌ಗಳ ಸಮಾವೇಶದಲ್ಲಿ ಆದ ತೀರ್ಮಾನದಂತೆ ಒಂದು ರಾಷ್ಟ್ರ ಒಂದು ಚುನಾವಣೆ ಬಗ್ಗೆ ವಿಶೇಷ ಚರ್ಚೆ ನಡೆಸಬೇಕೆಂಬ ಉದ್ದೇಶವಿದೆ ಎಂದರು.

ಗುಜರಾತ್‌ನ ಕೆವಾಡಿಯಲ್ಲಿರುವ ಸರ್ದಾರ್ ವಲ್ಲಭಾಯ್ ಪಟೇಲ್‌ರವರ ಪ್ರತಿಮೆ ನೋಡುವಂತಹದ್ದು. ಅವರ ವ್ಯಕ್ತಿತ್ವವು ಮಹತ್ವದ್ದಾಗಿದೆ. ಸದಸ್ಯರು ಸಾಧ್ಯವಾದರೆ ಭೇಟಿ ನೀಡುವಂತೆ ಸಭಾಧ್ಯಕ್ಷರು ತಿಳಿಸಿದರು.

## ಕೃಷಿ ಇಲಾಖೆಯ ಖಾಲಿ ಹುದ್ದೆಗಳ ಭರ್ತಿ ಶೀಘ್ರದಲ್ಲಿ

**ಬೆಂಗಳೂರು, ಡಿಸೆಂಬರ್ 07 (ಕರ್ನಾಟಕ ವಾರ್ತೆ):**

ಕೊಪ್ಪಳ ಜಿಲ್ಲೆಯ ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕರ, ಉಪ ಕೃಷಿ ನಿರ್ದೇಶಕರ ಹಾಗೂ ಸಹಾಯಕ ಕೃಷಿ ನಿರ್ದೇಶಕರ ಕಛೇರಿಗಳಲ್ಲಿ ಒಟ್ಟು 246 ಹುದ್ದೆಗಳು ಮಂಜೂರಾಗಿದ್ದು ಇದರಲ್ಲಿ 141 ಹುದ್ದೆಗಳು ಭರ್ತಿಯಾಗಿದ್ದು ಹಾಗೂ 105 ಹುದ್ದೆಗಳು ಖಾಲಿಯಿರುತ್ತವೆ ಎಂದು ಕೃಷಿ ಸಚಿವ ಬಿ.ಸಿ.ಪಾಟೀಲ್ ಸದನಕ್ಕೆ ತಿಳಿಸಿದರು.

ಕೊಪ್ಪಳ ಜಿಲ್ಲೆಯ ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕರ, ಉಪನಿರ್ದೇಶಕರ ಹಾಗೂ ಸಹಾಯಕ ನಿರ್ದೇಶಕರ ಕಛೇರಿಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮವೇನು ಎಂದು ಶಾಸಕ ಆಚಾರ್ ಹಾಲಪ್ಪ ಬಸಪ್ಪ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು 2018–19ನೇ ಸಾಲಿನಲ್ಲಿ ರಾಜ್ಯದಲ್ಲಿ ಗ್ರೂಪ್–ಎ ಮತ್ತು ಬಿ ವೃಂದದಲ್ಲಿ ಸಹಾಯಕ ಕೃಷಿ ನಿರ್ದೇಶಕರು 66 ಹುದ್ದೆ, ಕೃಷಿ ಅಧಿಕಾರಿಗಳು 350 ಹುದ್ದೆ, ಸಹಾಯಕ ಕೃಷಿ ಅಧಿಕಾರಿಗಳು 157 ಹುದ್ದೆಗಳನ್ನು ನೇರ ನೇಮಕತಿ ಮೂಲಕ ಭರ್ತಿ ಮಾಡಲಾಗಿದೆ. ಹಾಗೂ ಗ್ರೂಪ್–ಸಿ ವೃಂದದಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪತ್ರ ಬರೆಯಲಾಗಿದೆ ಹಾಗೂ ಮುಂಬಡ್ತಿ ಕೋಟಾದಡಿ ಖಾಲಿ ಇರುವ ಹುದ್ದೆಗಳನ್ನು ನಿಯಮಾನುಸಾರ ಬಡ್ತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ.

ಹೊರಗುತ್ತಿಗೆ ಆಧಾರದ ಮೇಲೆ 70 ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲಾಗಿದೆ. ಸದರಿ ನೇಮಕಾತಿಯನ್ನು ಸರ್ಕಾರ/ಇಲಾಖಾ ಮಾರ್ಗಸೂಚಿಯನ್ವಯ ಹೊರಗುತ್ತಿಗೆ ಆಧಾರದ ಮೇಲೆ ಪಡೆಯಲಾಗಿದೆ.(ಖಾಲಿ ಹದ್ದೆಗಳಿಗೆ ಎದುರಾಗಿ ಹಾಗೂ ಆತ್ಮಯೋಜನೆಯಡಿ ಪಡೆದ ಹುದ್ದೆಗಳು) ಎಂದು ತಿಳಿಸಿದರು.

## DAK ADALAT

**Bengaluru, December 7 (Karnataka Information)**

**REGIONAL LEVEL POST FORUM CUM DAK ADALAT for redressal of public grievances relating to Postal Services scheduled to be held on 16th December, 2020, 3-00 P.M. at Megdhoot Auditorium of Bengaluru**

GPO (5th Floor) Rajbhavan Road, Bengaluru-560 001. Members of the public and esteemed customers of Department of posts in Bengaluru Region may address their grievances if any, to the Assistant Director-II Postmaster General, Bengaluru HQ Region, Bengaluru-560 001, so as to reach this office latest by 9th December 2020. Grievances can also be sent by email to tech.karbg@indiapost.gov.in. It is requested that brief and specific details with relavant facts and figures may please be furnished alongwith complete contact details to facilitate speedy redressal says official press release.

## ಸಚಿವರ ಪ್ರವಾಸ

**ಬೆಂಗಳೂರು, ಡಿಸೆಂಬರ್ 07 (ಕರ್ನಾಟಕ ವಾರ್ತೆ):**

ವಸತಿ ಸಚಿವ ವಿ. ಸೋಮಣ್ಣ ಅವರು ಡಿಸೆಂಬರ್ 13 ರಂದು ಧರ್ಮಸ್ಥಳಕ್ಕೆ ಭೇಟಿ ನೀಡಿ ಅಂದೇ ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.